ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE : 04/08/2020

# ಸಹಕಾರ ಸಂಘಗಳ ಚುನಾವಣೆ ಮುಂದೂಡಿಕೆ ಆದೇಶಕ್ಕೆ ತಡೆ

**ಬೆಂಗಳೂರು:** ಕರೊನಾ ಸೋಂಕು ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಸಹಕಾರ ಸಂಘಗಳ ಚುನಾವಣೆ ಮುಂದೂಡಿ, ಆಡಳಿತಾಧಿಕಾರಿ ನೇಮಕ ಮಾಡಲು ಸರ್ಕಾರ ಹೊರಡಿಸಿದ ಆದೇಶಕ್ಕೆ ಹೈಕೋರ್ಟ್ ಸೋಮವಾರ ತಡೆಯಾಜ್ಞೆ ನೀಡಿದೆ.

ಸರ್ಕಾರದ ಆದೇಶ ರದ್ದು ಕೋರಿ ಪುತ್ತೂರಿನ ದಕ್ಷಿಣ ಕನ್ನಡ ಕೇಂದ್ರ ಸಹಕಾರಿ ಸಗಟು ಸಲ್ಲಿಕೆಯಾಗಿರುವ ತಕರಾರು ಅರ್ಜಿ ವಿಚಾರಣೆ ನಡೆಸಿದ ನ್ಯಾ. ಸಂಜಯ್ ಗೌಡ ಅವರಿದ್ದ ಪೀಠ, ಜುಲೈ 14ರಂದು ಸರ್ಕಾರ ಹೊರಡಿಸಿದ್ದ ಆದೇಶಕ್ಕೆ ಮಧ್ಯಂತರ ತಡೆಯಾಜ್ಞೆ ನೀಡಿತು. ದಕ್ಷಿಣ ಕನ್ನಡ ಜನತಾ ಬಜಾರ್‌ಗೆ ಆಡಳಿತಾಧಿಕಾರಿ ನೇಮಕ ಮಾಡಿ ಜು.20ರಂದು ಹೊರಡಿಸಿದ್ದ ಆದೇಶಕ್ಕೂ ತಡೆ ನೀಡಿದ ಹೈಕೋರ್ಟ್, ಅರ್ಜಿ ಸಂಬಂಧ ಸಹಕಾರ ಇಲಾಖೆಯ ಕಾರ್ಯದರ್ಶಿ, ಸಹಕಾರ ಸಂಘಗಳ ನಿಬಂಧಕರು, ಮೈಸೂರು ಪ್ರಾಂತ ಸಹಕಾರ ಸಂಘಗಳ



ಜಂಟಿ ನಿಬಂಧಕರು ಹಾಗೂ ರಾಜ್ಯ ಸಹಕಾರ ಸಂಘಗಳ ಚುನಾವಣಾ ಆಯೋಗ ಸೇರಿ ಎಲ್ಲ ಪ್ರತಿವಾದಿಗಳಿಗೆ ನೋಟಿಸ್ ಜಾರಿಗೊಳಿಸಿ ವಿಚಾರಣೆ ಮುಂದೂಡಿತು.

ಇದಕ್ಕೂ ಮುನ್ನ ಅರ್ಜಿದಾರರ ಪರ ವಕೀಲ ಅರುಣ್ ಶ್ಯಾಮ್ ವಾದ ಮಂಡಿಸಿ, ಚುನಾವಣೆ ಮುಂದೂಡಿ ಸರ್ಕಾರ ಹೊರಡಿಸಿರುವ ಆದೇಶ ಕಾನೂನುಬಾಹಿರವಾಗಿದೆ. ಆದ್ದರಿಂದ ಸರ್ಕಾರದ ಆದೇಶ ಸಂವಿಧಾನ ಬಾಹಿರ ಎಂಬುದಾಗಿ ಘೋಷಿಸಬೇಕು ಎಂದು ಕೋರಿದರು.

## ಸರ್ಕಾರದ ನಿಲುವು ಕೇಳಿದ ಹೈಕೋರ್ಟ್

**ಬೆಂಗಳೂರು:** ಕೋವಿಡ್-19 ಹಿನ್ನೆಲೆಯಲ್ಲಿ ಸಾರ್ವಜನಿಕರ ಸಂಪರ್ಕ ಪತ್ತೆ ಹಚ್ಚಲು ರೂಪಿಸಲಾಗಿರುವ 'ಆರೋಗ್ಯ ಸೇತು' ಮೊಬೈಲ್ ಆ್ಯಪ್ ಬಳಕೆ ಕಡ್ಡಾಯಗೊಳಿಸುವ ವಿಚಾರಕ್ಕೆ ಸಂಬಂಧಿಸಿದಂತೆ ನಿಲುವು ಸ್ಪಷ್ಟಪಡಿಸುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶಿಸಿದೆ. ಆರೋಗ್ಯ ಸೇತು ಆ್ಯಪ್ ಬಳಕೆಯನ್ನು ಕೇಂದ್ರ ಸರ್ಕಾರ ಕಡ್ಡಾಯಗೊಳಿಸಿದೆ ಎಂದು ಆಕ್ಷೇಪಿಸಿ ಅನಿವರ್ ಎ. ಅರವಿಂದ್ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಸಿಜೆ ಎ.ಎಸ್. ಓಕ್ ಹಾಗೂ ನ್ಯಾ. ಅಶೋಕ್ ಎಸ್. ಕಿಣಗಿ ಅವರಿದ್ದ ಪೀಠ ಸೋಮವಾರ ವಿಚಾರಣೆ ನಡೆಸಿತು. ಆ್ಯಪ್ ಬಳಕೆ ಕಡ್ಡಾಯವಲ್ಲ ಎಂದು ಕೇಂದ್ರ ಸರ್ಕಾರ ಹೇಳಿದೆ. ಈ ವಿಚಾರದಲ್ಲಿ ರಾಜ್ಯ ಸರ್ಕಾರದ ನಿಲುವೇನು ಎಂಬ ಬಗ್ಗೆ ವಿವರಣೆ ನೀಡುವಂತೆ ಸೂಚಿಸಿ ವಿಚಾರಣೆಯನ್ನು ಆ.13ಕ್ಕೆ ಮುಂದೂಡಿತು.

**» ಆರೋಗ್ಯ ಸೇತು ಮೊಬೈಲ್ ಆ್ಯಪ್ ಬಳಕೆ**